# Akashvani : Bangalore
# Regional Bulletin In Kannada
# 31.05.2025 / 18.40 hrs

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**<><*<><>*><>**

## ಮುಖ್ಯಾಂಶಗಳು

೧. ರಾಜ್ಯದ ೯ ರೈಲ್ವೆ ಯೋಜನೆಗಳಿಗೆ ಅಗತ್ಯವಾದ ಭೂಸ್ವಾಧೀನ ಕಾರ್ಯ ಕಾಲಮಿತಿಯೊಳಗೆ ಪೂರ್ಣಗೊಳಿಸುವಂತೆ ಜಿಲ್ಲಾಧಿಕಾರಿಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚನೆ

೨. ಸಾರ್ವಜನಿಕ ಸ್ಥಳಗಳಲ್ಲಿ ತಂಬಾಕು ಸೇವನೆ ; ದಂಡದ ಮೊತ್ತ ೧ ಸಾವಿರ ರೂಪಾಯಿಗಳಿಗೆ ಏರಿಕೆ

೩. ಕೋವಿಡ್ ಹಿನ್ನೆಲೆಯಲ್ಲಿ ಶಾಲೆಗಳಲ್ಲಿ ಕೈಗೊಳ್ಳಬೇಕಾದ ಮುಂಜಾಗ್ರತಾ ಕ್ರಮಗಳ ಕುರಿತು ರಾಜ್ಯ ಸರ್ಕಾರದಿಂದ ಮಾರ್ಗಸೂಚಿ ಪ್ರಕಟ

೪. ಬೆಂಗಳೂರು ನಗರದಲ್ಲಿ ಮೇ ತಿಂಗಳಲ್ಲಿ ೩೧೫ ಮಿಲಿಮೀಟರ್ ಮಳೆ ; ಸಾರ್ವಕಾಲಿಕ ದಾಖಲೆ

**<><*<><>*><>**

ರಾಜ್ಯದಲ್ಲಿ ಒಟ್ಟು ೯ ರೈಲ್ವೇ ಯೋಜನೆಗಳು ಅನುಷ್ಠಾನ ಹಂತದಲ್ಲಿದ್ದು, ಇದಕ್ಕೆ ಅಗತ್ಯವಾದ ಭೂಸ್ವಾಧೀನ ಕಾರ್ಯವನ್ನು ಆಯಾ ಜಿಲ್ಲಾಧಿಕಾರಿಗಳು ಕಾಲಮಿತಿಯೊಳಗೆ ಪೂರ್ಣಗೊಳಿಸಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚಿಸಿದ್ದಾರೆ. ಬೆಂಗಳೂರಿನಲ್ಲಿ ನಡೆದ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ ಸಭೆಯಲ್ಲಿ ಮಾತನಾಡಿದ ಅವರು, ಜಿಲ್ಲೆಗಳಲ್ಲಿ ಪ್ರವಾಸೋದ್ಯಮ ಅಭಿವೃದ್ಧಿಗೆ ತಾಣಗಳನ್ನು ಗುರುತಿಸಿ, ಕ್ರಿಯಾ ಯೋಜನೆಗಳನ್ನು ರೂಪಿಸಬೇಕು ಎಂದು ನಿರ್ದೇಶಿಸಿದರು. ಜಿಲ್ಲಾಧಿಕಾರಿಗಳು ಹಾಗೂ ಪೊಲೀಸ್ ವರಿಷ್ಠಾಧಿಕಾರಿಗಳು ಕಠಿಣ ಕ್ರಮ ಕೈಗೊಂಡರೆ, ಮೈಕ್ರೋ ಫೈನಾನ್ಸ್ ಹಾವಳಿಯನ್ನು ಸಂಪೂರ್ಣವಾಗಿ ಮಟ್ಟ ಹಾಕಲು ಸಾಧ್ಯವಿದೆ ಎಂದರು.

**<><*<><>*><>**

ರಾಜ್ಯ ಸರ್ಕಾರವು ಸಿಗರೇಟ್ ಮತ್ತು ತಂಬಾಕು ಉತ್ಪನ್ನಗಳ ಸಾರ್ವಜನಿಕ ಬಳಕೆಗಾಗಿನ ದಂಡವನ್ನು ೨೦೦ ರೂಪಾಯಿಗಳಿಂದ ೧ ಸಾವಿರ ರೂಪಾಯಿಗಳಿಗೆ ಹೆಚ್ಚಿಸುವ ಗೆಜೆಟ್ ಅಧಿಸೂಚನೆ ಪ್ರಕಟಿಸಿದೆ. ಆರೋಗ್ಯ ಸಚಿವಾಲಯ ಇಂದು ಬಿಡುಗಡೆ ಮಾಡಿದ ಪ್ರಕಟಣೆಯ ಪ್ರಕಾರ, ಸಿಗರೇಟ್ ಮತ್ತು ತಂಬಾಕು ಉತ್ಪನ್ನಗಳನ್ನು ಖರೀದಿಸಲು ಕನಿಷ್ಠ ಕಾನೂನುಬದ್ಧ ವಯಸ್ಸನ್ನು ೧೮ ರಿಂದ ೨೧ ವರ್ಷಗಳಿಗೆ ಸರ್ಕಾರ ಹೆಚ್ಚಿಸಿದೆ. ರಾಜ್ಯಾದ್ಯಂತ ಹುಕ್ಕಾ ಬಾರ್‌ಗಳನ್ನು ತೆರೆಯುವುದು ಅಥವಾ ನಿರ್ವಹಿಸುವುದನ್ನು ಸರ್ಕಾರ ನಿಷೇಧಿಸಿದೆ.

<><*<><>*><>

ವಿಶ್ವ ತಂಬಾಕು ರಹಿತ ದಿನಾಚರಣೆಯನ್ನು ಇಂದು ಬೆಂಗಳೂರು ಗ್ರಾಮಾಂತರ ಜಿಲ್ಲೆಯ ವಿವಿಧೆಡೆಗಳಲ್ಲಿ ಆಚರಿಸಲಾಯಿತು. ದೊಡ್ಡಬಳ್ಳಾಪುರದ ಶ್ರೀ ರಾಮ ನರ್ಸಿಂಗ್ ಕಾಲೇಜಿನಲ್ಲಿ ನಡೆದ ವಿಶ್ವ ತಂಬಾಕು ರಹಿತ ದಿನಾಚರಣೆಯಲ್ಲಿ ತಾಲೂಕು ವೈದ್ಯಾಧಿಕಾರಿ ಡಾ. ಪರಮೇಶ್ವರ್ ಮಾತನಾಡಿ, ತಂಬಾಕು ಸೇವನೆ ಎಲ್ಲಾ ರೀತಿಯ ಕ್ಯಾನ್ಸರ್‌ಗಳಿಗೂ ಮೂಲವಾಗಿದ್ದು, ಹೃದಯ ಸಂಬಂಧಿ ಕಾಯಿಲೆಗಳಿಗೂ ಕಾರಣವಾಗಿದೆ ಎಂದು ಹೇಳಿದರು. ಸಾರ್ವಜನಿಕರು ತಂಬಾಕು ಉತ್ಪನ್ನಗಳ ಬಳಕೆಯಿಂದ ದೂರವಿರಬೇಕು ಎಂದು ಬಳ್ಳಾರಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಹೇಳಿದರು. ವಿಶ್ವ ತಂಬಾಕು ರಹಿತ ದಿನಾಚರಣೆ ಅಂಗವಾಗಿ ಬಳ್ಳಾರಿಯಲ್ಲಿ ಏರ್ಪಡಿಸಿದ್ದ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

<><*<><>*><>

ಸರ್ಕಾರಿ ಮತ್ತು ಖಾಸಗಿ ಶಾಲೆಗಳಲ್ಲಿ ಕೈಗೊಳ್ಳಬೇಕಾದ ಮುಂಜಾಗ್ರತಾ ಕ್ರಮಗಳ ಬಗ್ಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮಾರ್ಗಸೂಚಿ ಹೊರಡಿಸಿದೆ. ಶಾಲಾ ಮಕ್ಕಳಲ್ಲಿ ಜ್ವರ, ಕೆಮ್ಮು ಮತ್ತು ನೆಗಡಿ ಇತರೆ ಲಕ್ಷಣಗಳು ಕಂಡುಬಂದಲ್ಲಿ ಮಕ್ಕಳನ್ನು ಶಾಲೆಗೆ ಕಳುಹಿಸಿದೇ ವೈದ್ಯರ ಸಲಹೆಯಂತೆ ಸೂಕ್ತ ಚಿಕಿತ್ಸೆ ನೀಡುವುದು. ಸಂಪೂರ್ಣವಾಗಿ ಗುಣಮುಖರಾದ ನಂತರವೇ ಮಕ್ಕಳನ್ನು ಶಾಲೆಗೆ ಕಳುಹಿಸುವುದು. ಜ್ವರ, ಕೆಮ್ಮು, ನೆಗಡಿ ಇರುವ ಮಕ್ಕಳು ಶಾಲೆಗೆ ಬಂದರೆ, ಪೋಷಕರಿಗೆ ಮಾಹಿತಿ ನೀಡಿ, ಮನೆಗೆ ಕಳುಹಿಸುವುದು. ಶಾಲಾ ಶಿಕ್ಷಕರು ಬೋಧಕೇತರ ಸಿಬಂದಿಗಳಲ್ಲಿ ಜ್ವರ, ಕೆಮ್ಮು, ನೆಗಡಿ ಕಂಡುಬಂದಲ್ಲಿ ಸೂಕ್ತ ಕ್ರಮ ಪಾಲಿಸುವುದು ಸೇರಿದಂತೆ ಕಟ್ಟುನಿಟ್ಟಿನ ಮುಂಜಾಗ್ರತಾ ಕ್ರಮ ಕೈಗೊಳ್ಳುವಂತೆ ಇಲಾಖೆ ಸೂಚನೆ ನೀಡಿದೆ.

<><*<><>*><>

ಕೋವಿಡ್ ನಿರ್ವಹಣೆಗೆ ಬಾಗಲಕೋಟೆ ಜಿಲ್ಲಾಸ್ಪತ್ರೆಯಲ್ಲಿ ಸಕಲ ಸಿದ್ಧತೆ ಕೈಗೊಳ್ಳಲಾಗಿದೆ. ಈಗಾಗಲೇ ಆಸ್ಪತ್ರೆಯಲ್ಲಿ ಹೆಚ್ಚುವರಿ ಬೆಡ್‌ಗಳನ್ನು ಹಾಕಲಾಗಿದೆ. ಎಲ್ಲಾ ಬೆಡ್‌ಗಳಿಗೆ ಆಕ್ಸಿಜನ್, ಐಸಿಯು ವ್ಯವಸ್ಥೆ ಮಾಡಿಕೊಳ್ಳಲಾಗಿದೆ. ಈಗಾಗಲೇ ಜಿಲ್ಲಾಸ್ಪತ್ರೆ ಹೊರಗೆ ಬೃಹತ್ ಆಕ್ಸಿಜನ್ ಘಟಕ ನಿರ್ಮಿಸಲಾಗಿದೆ. ರಾಜ್ಯದಲ್ಲಿ ಕೋವಿಡ್ ಪ್ರಕರಣಗಳು ವರದಿಯಾಗುತ್ತಿರುವ ಹಿನ್ನೆಲೆಯಲ್ಲಿ ವಿಜಯಪುರ ಜಿಲ್ಲೆಯ ಸಾರ್ವಜನಿಕರು ಈ ಕುರಿತು ಯಾವುದೇ ಭಯಪಡುವ ಅವಶ್ಯಕತೆ ಇಲ್ಲ. ಜಿಲ್ಲೆಯಲ್ಲಿ ಪ್ರಸ್ತುತ ಯಾವುದೇ ಕೋವಿಡ್ ಪ್ರಕರಣ ವರದಿಯಾಗಿಲ್ಲ. ಆದಾಗ್ಯೂ ಮುಂಜಾಗ್ರತೆ ಕ್ರಮ ವಹಿಸುವಂತೆ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಟಿ.ಭೂಬಾಲನ್ ಸೂಚಿಸಿದ್ದಾರೆ.

<><*<><>*><>

ಚಿಕ್ಕಮಗಳೂರು ಜಿಲ್ಲೆಯಲ್ಲಿ ಜೂನ್ ೧೨ ರವರೆಗೆ ವಿಕಸಿತ ಕೃಷಿ ಸಂಕಲ್ಪ ಅಭಿಯಾನ ಹಮ್ಮಿಕೊಳ್ಳಲಾಗಿದೆ ಎಂದು ಮೂಡಿಗೆರೆಯ ಜಿಲ್ಲಾ ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥ ಕೆ.ಎಂ.ಕೃಷ್ಣಮೂರ್ತಿ ತಿಳಿಸಿದ್ದಾರೆ. ಈ ಕುರಿತು ಸುದ್ದಿಗಾರರಿಗೆ ಮಾಹಿತಿ ನೀಡಿದ ಅವರು, ಈಗಾಗಲೇ ಜಿಲ್ಲೆಯ ಕಡೂರು ತಾಲೂಕಿನ ಪಂಚನಹಳ್ಳಿ, ಅಣ್ಣಿಗೆರೆ, ಗರ್ಜೆ, ಯಗಟಿ, ಕುಂಕನಾಡು ಸೇರಿ ಹಲವು ಗ್ರಾಮಗಳಲ್ಲಿ ಅಭಿಯಾನ ನಡೆಸಲಾಗಿದೆ ಎಂದು ವಿವರಿಸಿದರು.

<><*<><>*><>

ವಿಕಸಿತ ಕೃಷಿ ಸಂಕಲ್ಪ ಕುರಿತಂತೆ ಇಂದು ರಾತ್ರಿ ೮ ಗಂಟೆಗೆ ಆಕಾಶವಾಣಿಯ ಮುಖ್ಯವಾಹಿನಿಯಲ್ಲಿ ವಿಶೇಷ ಸಂವಾದ ಕಾರ್ಯಕ್ರಮ ಪ್ರಸಾರವಾಗಲಿದೆ. ಭಾರತೀಯ ತೋಟಗಾರಿಕಾ ಸಂಸ್ಥೆ ಹೆಸರಘಟ್ಟದ ನಿವೃತ್ತ ನಿರ್ದೇಶಕ ಡಾ. ಎಂ. ಆರ್.ದಿನೇಶ್ ಸಂವಾದದಲ್ಲಿ ವಿಶೇಷ ಅತಿಥಿಯಾಗಿ ಭಾಗವಹಿಸಲಿದ್ದು, ನಿವೃತ್ತ ಕೃಷಿ ವಿಜ್ಞಾನಿ ಡಾ. ಬಿ ನಾರಾಯಣಸ್ವಾಮಿ ಚರ್ಚೆ ನಡೆಸಿಕೊಡಲಿದ್ದಾರೆ.

<><*<><>*><>

ಆಕಾಶವಾಣಿ ಹಾಗೂ ದೂರದರ್ಶನದ ಚಿತ್ರದುರ್ಗ ಜಿಲ್ಲೆಯ ಅರೆಕಾಲಿಕ ವರದಿಗಾರರಾಗಿದ್ದ ಚೆನ್ನಬಸವಯ್ಯ ಅವರು ನಿಧನರಾಗಿದ್ದಾರೆ. ಅವರಿಗೆ ೪೬ ವರ್ಷ ವಯಸ್ಸಾಗಿತ್ತು. ಮೆದುಳಿನಲ್ಲಿ ರಕ್ತಸ್ರಾವದ ಕಾರಣ ಕೆಲ ದಿನಗಳ ಹಿಂದೆ ಆಸ್ಪತ್ರೆಗೆ ದಾಖಲಾಗಿದ್ದ ಅವರು, ಚಿಕಿತ್ಸೆ ಫಲಿಸಿದೇ ಸಾವನ್ನಪ್ಪಿದ್ದಾರೆ. ಅವರು ಪತ್ನಿ ಹಾಗೂ ಕುಟುಂಬದವರನ್ನು ಅಗಲಿದ್ದಾರೆ.

<><*<><>*><>

ಬೆಂಗಳೂರಿನ ಹೊಸಕೆರೆಹಳ್ಳಿ ಜಂಕ್ಷನ್ ಮೇಲ್ಸೇತುವೆ ಕಾಮಗಾರಿಯನ್ನು ಮೂರು ತಿಂಗಳಲ್ಲಿ ಪೂರ್ಣಗೊಳಿಸಲು ಬಿಬಿಎಂಪಿ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಬೆಂಗಳೂರಿನ ರಾಜರಾಜೇಶ್ವರಿ ನಗರ ವಲಯ ವ್ಯಾಪ್ತಿಯಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ಇಂದು ಪರಿಶೀಲನೆ ನಡೆಸಿ, ಹೊರ ವರ್ತುಲ ರಸ್ತೆಯ ಪಿ.ಇ.ಎಸ್ ಕಾಲೇಜು ಬಳಿಯ ಹೊಸಕೆರೆಹಳ್ಳಿ ಜಂಕ್ಷನ್‌ನಲ್ಲಿ ಕೈಗೆತ್ತಿಕೊಂಡಿರುವ ಮೇಲ್ಸೇತುವೆ ಕಾಮಗಾರಿಗೆ ವೇಗ ನೀಡಿ, ೩ ತಿಂಗಳಲ್ಲಿ ಕಾಮಗಾರಿಯನ್ನು ಪೂರ್ಣಗೊಳಿಸುವಂತೆ ಅಧಿಕಾರಿಗಳಿಗೆ ನಿರ್ದೇಶಿಸಿದರು. ಹೊಸಕೆರೆಹಳ್ಳಿ ಜಂಕ್ಷನ್‌ನಲ್ಲಿ ೫೦೦ ಮೀಟರ್ ಉದ್ದದ ಮೇಲ್ಸೇತುವೆ ಕಾಮಗಾರಿ ಪ್ರಗತಿಯಲ್ಲಿದ್ದು, ಈಗಾಗಲೇ ಶೇಖಡ ೭೫ ರಷ್ಟು ಕಾಮಗಾರಿ ಪೂರ್ಣಗೊಳಿಸಲಾಗಿದೆ. ಇನ್ನು ಒಂದು ಭಾಗದಲ್ಲಿ ಡೌನ್ ರ್‍ಯಾಂಪ್ ಕಾಮಗಾರಿ ಪ್ರಗತಿಯಲಿದ್ದು, ಸರ್ವೀಸ್ ರಸ್ತೆಯ ವಿಸ್ತರಣೆಗಾಗಿ ಪ್ರಸ್ತಾವನೆ ಸಲ್ಲಿಸಲಾಗಿದೆ. ಭೂಸ್ವಾಧೀನ ಪ್ರಕ್ರಿಯೆಯನ್ನು ಶೀಘ್ರ ಪೂರ್ಣಗೊಳಿಸಿ, ಸಂಚಾರ ಪೊಲೀಸ್ ವಿಭಾಗದ ಜೊತೆ ಮಾತನಾಡಿ, ತ್ವರಿತಗತಿಯಲ್ಲಿ ಕಾಮಗಾರಿ ಪೂರ್ಣಗೊಳಿಸುವಂತೆ ಬಿಬಿಎಂಪಿ ಮುಖ್ಯ ಆಯುಕ್ತರು ಅಧಿಕಾರಿಗಳಿಗೆ ಸೂಚನೆ ನೀಡಿದರು.

<><*<><>*><>

ಇನ್ನು ಹವಾವರ್ತಮಾನ,

ಬೆಂಗಳೂರು ನಗರದಲ್ಲಿ ಮೇ ತಿಂಗಳಲ್ಲಿ ೩೧೫ ಮಿಲಿಮೀಟರ್ ಮಳೆಯಾಗಿದ್ದು, ಇದು ಸಾರ್ವಕಾಲಿಕ ದಾಖಲೆಯಾಗಿದೆ. ೨೦೨೩ರ ಮೇ ತಿಂಗಳಲ್ಲಿ ೩೦೫.೪ ಮಿಲಿಮೀಟರ್ ಮಳೆಯಾಗಿತ್ತು. ನೈಋತ್ಯ ಮುಂಗಾರು ರಾಜ್ಯದ ಕರಾವಳಿಯಲ್ಲಿ ತೀವ್ರವಾಗಿ, ದಕ್ಷಿಣ ಒಳನಾಡಿನಲ್ಲಿ ಸಾಮಾನ್ಯವಾಗಿ ಮತ್ತು ಉತ್ತರ ಒಳನಾಡಿನಲ್ಲಿ ದುರ್ಬಲವಾಗಿತ್ತು. ಕರಾವಳಿಯ ಬಹುತೇಕ ಕಡೆಗಳಲ್ಲಿ ಹಾಗೂ ದಕ್ಷಿಣ ಒಳನಾಡು ಮತ್ತು ಉತ್ತರ ಒಳನಾಡಿನ ಕೆಲವು ಕಡೆಗಳಲ್ಲಿ ಇಂದು ಮಳೆಯಾಗಿದೆ. ದಕ್ಷಿಣಕನ್ನಡ

ಜಿಲ್ಲೆಯ ಪುತ್ತೂರಿನಲ್ಲಿ ಅತಿ ಹೆಚ್ಚು ೨೩ ಸೆಂಟಿ ಮೀಟರ್ ಮಳೆಯಾಗಿದೆ. ಇದೇ ವೇಳೆ ಉಪ್ಪಿನಂಗಡಿಯಲ್ಲಿ ೨೨, ಬೆಳ್ತಂಗಡಿ ೨೦, ಸುಳ್ಯ ೧೯, ಮಾಣಿ ೧೬, ಬಂಟ್ವಾಳ ೧೪, ಭಾಗಮಂಡಲ ಮತ್ತು ಧರ್ಮಸ್ಥಳದಲ್ಲಿ ತಲಾ ೧೨ ಸೆಂಟಿ ಮೀಟರ್ ಮಳೆಯಾಗಿದೆ. ಬೆಂಗಳೂರು ಸುತ್ತಮುತ್ತ ಮುಂದಿನ ೨೪ ಗಂಟೆಗಳಲ್ಲಿ ಭಾಗಶಃ ಮೋಡ ಕವಿದ ವಾತಾವರಣ. ಗಾಳಿ ಸಹಿತ ಹಗುರ ಮಳೆಯಾಗುವ ಸಾಧ್ಯತೆಯಿದೆ. ಗರಿಷ್ಠ ೨೮ ಡಿಗ್ರಿ ಸೆಲ್ಸಿಯೆಸ್ ಹಾಗೂ ಕನಿಷ್ಠ ೨೧ ಡಿಗ್ರಿ ಸೆಲ್ಸಿಯೆಸ್ ತಾಪಮಾನ ಸಂಭವ.

**<><*<><>*><>**

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಶಾಂತಿ ಮತ್ತು ಸೌಹಾರ್ದತೆ ಮರು ಸ್ಥಾಪಿಸುವ ದೃಷ್ಟಿಯಲ್ಲಿ ಶೀಘ್ರವೇ ಶಾಂತಿ ಸಮಿತಿ ಸಭೆ ಕರೆಯಲಾಗುವುದು ಎಂದು ದಕ್ಷಿಣ ಕನ್ನಡ ಜಿಲ್ಲಾ ಉಸ್ತುವಾರಿ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ. ಮಂಗಳೂರು ನಗರ ಪೊಲೀಸ್ ಕಮಿಷನರ್ ಕಚೇರಿಯಲ್ಲಿಂದು ಪೊಲೀಸ್ ಅಧಿಕಾರಿಗಳ ಸಭೆಯ ಬಳಿಕ ಮಾತನಾಡಿದ ಅವರು, ಎಲ್ಲಾ ಸಮುದಾಯದವರನ್ನು ಸಂಘಟಿಸುವ ಮೂಲಕ ಬಂಧುತ್ವ ಗಟ್ಟಿಗೊಳಿಸಲು ಪೂರಕ ಕಾರ್ಯಕ್ರಮ ಹಮ್ಮಿಕೊಳ್ಳಲಾಗುವುದು. ಸಮಾಜದಲ್ಲಿ ಕಾನೂನು, ಸುವ್ಯವಸ್ಥೆ ಸ್ಥಾಪಿಸುವ ಬಗ್ಗೆ ಎಲ್ಲ ಸಮಾಜದ ಮುಖಂಡರನ್ನು ಆಹ್ವಾನಿಸಿ, ಅಭಿಪ್ರಾಯ ಸಂಗ್ರಹಿಸಲಾಗುವುದು ಎಂದು ಹೇಳಿದರು. ಕರಾವಳಿಯ ಶೇಕಡಾ ೯೮ ಮಂದಿಗೆ ಶಾಂತಿ ಬೇಕು. ಶೇಕಡಾ ೨ ರಷ್ಟು ಮಂದಿಗೆ ಸ್ವಾರ್ಥ, ರಾಜಕೀಯ ಲಾಭ, ಸಂಘಟನೆ ದುರುಪಯೋಗಪಡಿಸಲು ಅಶಾಂತಿಯನ್ನು ಉಂಟು ಮಾಡುತ್ತಿದ್ದಾರೆ. ಇದನ್ನು ಬದಲಾಯಿಸುವ ಪ್ರಯತ್ನ ಮಾಡಲಾಗುವುದು ಎಂದರು.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**